ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 1 ರಿಂದ 3 ರವರೆಗೆ

ಅಧ್ಯಕ್ಷರು : "ಖಂಡ 1 ರಿಂದ 3 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 1 ರಿಂದ 3 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗು ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಎಸ್. ಸುರೇಶ್ ಕುಮಾರ್ (ಕಾನೂನು ಮತ್ತು ಸಂಸದೀಯ ವ್ಯವಹಾರ ಇಲಾಖೆ ಸಚಿವರು (ಕಂದಾಯ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, 2009ನೇ ಸಾಲಿನ ಕರ್ನಾಟಕ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

" 2009ನೇ ಸಾಲಿನ ಕರ್ನಾಟಕ ಸ್ಟ್ಯಾಂಪ್ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ಸೂಚಿಸಲಾಯಿತು.

ಋ) ಕರ್ನಾಟಕ ಧನವಿನಿಯೋಗ(ಸಂಖ್ಯೆ:1) ವಿಧೇಯಕ, 2009
ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) : 2009ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು :- ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಟಿ.ಬಿ.ಜಯಚಂದ್ರ :- ಅಧ್ಯಕ್ಷರು : ನೀವು ಈಗ Supplemtary Estimate ಅನ್ನು ತಂದಿದ್ದೀರಿ. ನೀವು ಯಾವುದಕ್ಕೆ ಖರ್ಚು ಮಾಡುತ್ತಿದ್ದೀರೆಂದರೆ, again it is non-plan expenditure only. Salary, Maintenance, Car purchases, Furniture and Purchase of Vehivles ಗೆ ಸುಮಾರು 6 ಸಾವಿರ ಕೋಟಿ ರೂಪಾಯಿಗಳ Supplementary Estimate ಅನ್ನು ತಂದಿದ್ದೀರಿ. ಅಂದರೆ, ಇದಕ್ಕೆಲ್ಲಾ ಕೊಡುವುದಕ್ಕಾಗಿಯೇ? It only increases the Non-plan expenditure. ಒಂದು ಕಡೆ ವಸೂಲಾಗುವುದನ್ನು ಈ ರೀತಿಯಾಗಿ ಖರ್ಚು ಮಾಡುತ್ತೀರೆಂದರೆ ಹೇಗೆ? ಇದರ ಬಗ್ಗೆ ಹೆಚ್ಚು ಚರ್ಚೆ ಮಾಡುವುದಕ್ಕೆ ಸ್ಕೋಪ್ ಇಲ್ಲ. ಇದರಲ್ಲಿರತಕ್ಕಂಥ ಲೋಪದೋಷಗಳ ಬಗ್ಗೆ ಹೇಳುತ್ತಿದ್ದೇನೆ.

ಶ್ರೀ ಬಿ.ಎಸ್.ಯಡಿಯೂರಪ್ಪ(ಮುಖ್ಯಮಂತ್ರಿಗಳು) :- ಮಾನ್ಯ ಅಧ್ಯಕ್ಷರೆ, 2008-09ನೇ ಸಾಲಿನ ಪೂರಕ ಅಂದಾಜಿನ ಮೊತ್ತ 6207.44 ಕೋಟಿ. ಇದರಲ್ಲಿ 3492.48 ಕೋಟಿ ರೂಪಾಯಿಗಳ ರಾಜಸ್ವ ವೆಚ್ಚ ಮತ್ತು 2704.96 ಕೋಟಿ ಬಂಡವಾಳ ವೆಚ್ಚ. ಇದು ತಮಗೂ ಕೂಡ ಗೊತ್ತಿದೆ. ಈ ಪೂರಕ ಅಂದಾಜಿನಲ್ಲಿ 324.05 ಕೋಟಿ ಕೇಂದ್ರ ಸರ್ಕಾರದ ಅನುದಾನವನ್ನು ಆಯವ್ಯಯದಲ್ಲಿ ಸೇರಿಸಲು ಒದಗಿಸಿದೆ. ಒಟ್ಟಾರೆಯಾಗಿ 2264.27 ಕೋಟಿ ರೂಪಾಯಿಯನ್ನು ಹೊಂದಾಣಿಕೆಯಲ್ಲಿ ಒದಗಿಸಲಾಗಿದೆ. ಆದ್ದರಿಂದ, ವಾಸ್ತವವಾಗಿ ಸಂಚಿತ ನಿಧಿಯಿಂದ ಹೊರ ಹರಿವಿನ ಮೊತ್ತ 3619.12 ಕೋಟಿ ಆಗಿದೆ. ಆದ್ದರಿಂದ ಒಟ್ಟು ಮೊತ್ತವಾದ 6027.44 ಕೋಟಿಗೆ ಅನುಮೋದನೆ ನೀಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

" 2009ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 1 ರಿಂದ 3 ರವರೆಗೆ

ಅಧ್ಯಕ್ಷರು : "ಖಂಡ 1 ರಿಂದ 3 ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 1 ರಿಂದ 3 ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗು ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್. ಯಡಿಯೂರಪ್ಪ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 2009ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

" 2009ನೇ ಸಾಲಿನ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ತಿದ್ದುಪಡಿ ಮಾಡಿರವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ಸೂಚಿಸಲಾಯಿತು.

ಅಧ್ಯಕ್ಷರು :– ಈಗ ಸದನವನ್ನು ಸಂಜೆ 5.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 3ಗಂಟೆ 49 ನಿಮಿಷಕ್ಕೆ ಮುಕ್ತಾಯಗೊಂಡು ಮತ್ತೆ ಸಂಜೆ 5.00 ಗಂಟೆಗೆ ಸೇರಲು ನಿಶ್ಚಯಿಸಿತು)